C-27574.

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಡಾ|| ಜ್ಯೋತಿ ಎಂ.ಟಿ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಸಾರ್ವಜನಿಕ ಆಸ್ಪತ್ರೆ ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರಿಗೆ ಸ್ನಾತಕೋತ್ತರ ವ್ಯಾಸಂಗದ ನಂತರ ಸ್ಥಳ ನೇಮಕಾತಿಗಾಗಿ ಕಾಯ್ದ ಅವಧಿ ಸಕ್ರಮಗೊಳಿಸುವ ಬಗ್ಗೆ.

ಓದಲಾಗಿದೆ:
1) ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ಸಂಖ್ಯೆ: ಬಿಇಸಿ: ಐಪಿಜಿ:187:2016-17, ದಿನಾಂಕ:26.02.2019.

2) ಮಹಾಲೇಖಪಾಲರ ಪತ್ರ ಸಂಖ್ಯೆ:ಜಿಇ14/ಎಂ22/ಜೆ21/2018-19/1000, ದಿನಾಂಕ:29-01-2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ಡಾ|| ಜ್ಯೋತಿ ಎಂ.ಟಿ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು, ಸಾರ್ವಜನಿಕ ಆಸ್ಪತ್ರೆ ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರು ವ್ಯಾಸಂಗದ ನಂತರ ದಿನಾಂಕ:01-08-2016 ರಿಂದ 25-08-2016ರವರೆಗೆ ಸ್ಥಳ ನೇಮಕಾತಿಗಾಗಿ ಕಾಯ್ದ ಅವಧಿಯನ್ನು ಆಯುಕ್ತಾಲಯದ ಹಂತದಲ್ಲಿ 'ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 8 (15)(ಎಫ್)' ರನುಸಾರ ಕಡ್ಡಾಯ ನಿರೀಕ್ಷಣಾ ಅವಧಿ ಎಂದು ಮಂಜೂರು ಮಾಡಲಾಗಿರುತ್ತದೆ. ಆದರೆ ಸದರಿ ವೈದ್ಯರು ದಿನಾಂಕ:26-08-2016ರಂದು ನಿಗದಿತ ಅವಧಿಯೊಳಗೆ ಕರ್ತವ್ಯಕ್ಕೆ ಹಾಜರಾಗದೆ ಗೈರುಹಾಜರಾಗಿ ದಿನಾಂಕ:19-09-2016ರಂದು ಪೂರ್ವಾಹ್ನ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಸದರಿ ಗೈರು ಹಾಜರಾದ ದಿನಾಂಕ:26-8-2016 ರಿಂದ 17-9-2016 [ದಿ:18-9-2016 ರಂದು ಸಾರ್ವತ್ರಿಕ ರಜೆಯನ್ನು ಒಳಗೊಂಡಂತೆ] ರವರೆಗಿನ ಅವಧಿಯನ್ನು ಸಕ್ರಮಗೊಳಿಸಲು ಒಂದು ವರ್ಷ ಮೀರಿರುವುದರಿಂದ, ಕೆ.ಸಿ.ಎಸ್.ಅರ್. ನಿಯಮ-198ರನ್ವಯ ಪರಿಶೀಲಿಸಿ ಸದರಿ ಅವಧಿಗೆ ಪರಿವರ್ತಿತ ರಜೆ ಮಂಜೂರು ಮಾಡಿ ಸಕ್ರಮಗೊಳಿಸುವಂತೆ ಕೋರಿ ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು ಇವರು ಡಾ|| ಜ್ಯೋತಿ ಎಂ.ಟಿ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು, ಸಾರ್ವಜನಿಕ ಆಸ್ಪತ್ರೆ ಚನ್ನಪಟ್ಟಣ, ರಾಮನಗರ ಜಿಲ್ಲೆ, ಇವರ ಹಕ್ಕಿನಲ್ಲಿ ದಿನಾಂಕ:25.8.2016ರಲ್ಲಿದ್ದಂತೆ ಒಟ್ಟು 233 ಗಳಿಕೆ ರಜೆ ಹಾಗೂ 153 ಅರ್ಧವೇತನ ರಜೆ ಬಾಕಿಯಿರುತ್ತವೆ ಎಂದು ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 83 ಹೆಚ್ ಎಸ್ ಹೆಚ್ 2019,**

**ಬೆಂಗಳೂರು, ದಿನಾಂಕ:04-02-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡಾ|| ಜ್ಯೋತಿ ಎಂ.ಟಿ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು, ಸಾರ್ವಜನಿಕ ಆಸ್ಪತ್ರೆ ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರಿಗೆ ಗೈರು ಹಾಜರಾದ ದಿನಾಂಕ:26-8-2016 ರಿಂದ 17-9-2016 [ದಿ:18-9-2016 ರಂದು ಸಾರ್ವತ್ರಿಕ ರಜೆಯನ್ನು ಒಳಗೊಂಡಂತೆ] ರವರೆಗಿನ ಅವಧಿಯನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ-198ರನ್ವಯ ಪರಿವರ್ತಿತ ರಜೆ ಎಂದು ಸಕ್ರಮಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 1996, ದಿನಾಂಕ:10.07.1996ರನ್ವಯ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದ ಮೇರೆಗೆ ಹೊರಡಿಸಿದೆ.

Office of the Commissioner Health & FWS, B'lore No. 2439 Dt. 8/2/21

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಯ. ಶಿವಶಂಕರ್) 04/02/2021
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.

GAO 972 9/2

2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ರಾಮನಗರ ಜಿಲ್ಲೆ.
5. ಡಾ|| ಜ್ಯೋತಿ ಎಂ.ಟಿ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು, ಸಾರ್ವಜನಿಕ ಆಸ್ಪತ್ರೆ ಚನ್ನಪಟ್ಟಣ, ರಾಮನಗರ ಜಿಲ್ಲೆ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ-1 ರವರ ಆಪ್ತ ಶಾಖೆ, ಆ.ಕು.ಕ ಇಲಾಖೆ
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

BBC.